## ಕರ್ನಾಟಕ ಸರ್ಕಾರ

ಸಂ:ಗ್ರಾಅಪ 265 ಗ್ರಾನೀಸ(4)2012

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:19.11.2013

**ಇವರಿಂದ:**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**
ಮುಖ್ಯ ಇಂಜಿನಿಯರ್,
ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ,
2ನೇ ಮಹಡಿ, ಗ್ರಾಮೀಣಾಭಿವೃದ್ಧಿ ಭವನ,
ಆನಂದರಾವ್ ವೃತ್ತ, **ಬೆಂಗಳೂರು-09.**

ಮಾನ್ಯರೆ,

ವಿಷಯ: ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿನ ಸರ್ಕಾರಿ ಶಾಲೆ ಮತ್ತು ಅಂಗನವಾಡಿ ಕೇಂದ್ರಗಳಿಗೆ ನೀರಿನ ಸೌಲಭ್ಯವನ್ನು ಒದಗಿಸುವ ಕುರಿತು.

ಉಲ್ಲೇಖ: ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆರವರ ಪತ್ರ ಸಂಖ್ಯೆ:ಡಿಡಬಲ್ಲ್ಯೂಸಿ:ಐಸಿಡಿ:ಬಿಎಲ್‌ಡಿ:03:2013-14, ದಿನಾಂಕ:09.10.2013.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಪ್ರಕರಣ ಸಂಖ್ಯೆ:17565/2013ರಲ್ಲಿನ ಸಾರ್ವಜನಿಕ ಹಿತಾಸಕ್ತಿ ರಿಟ್ ಅರ್ಜಿ ಸಂಬಂಧವಾಗಿ ರಾಜ್ಯದ ಎಲ್ಲಾ ಅಂಗನವಾಡಿ ಕೇಂದ್ರಗಳಿಗೆ ಹಂತ-ಹಂತವಾಗಿ ನೀರಿನ ಸೌಲಭ್ಯ ಒದಗಿಸುವ ಕುರಿತು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಪ್ರಮಾಣ ಪತ್ರವನ್ನು ಸಲ್ಲಿಸಬೇಕಾಗಿರುವುದರಿಂದ, ತ್ವರಿತವಾಗಿ ಅಂಗನವಾಡಿ ಕಟ್ಟಡಗಳಿಗೆ ನೀರಿನ ಸೌಕರ್ಯ ಕಲ್ಪಿಸಲು ಕೋರಿರುತ್ತಾರೆ. ಆದುದರಿಂದ ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿರುವ ಎಲ್ಲಾ ಅಂಗನವಾಡಿ ಕೇಂದ್ರಗಳಿಗೆ ಮತ್ತು ಸರ್ಕಾರಿ ಶಾಲೆಗಳಿಗೆ ನೀರಿನ ಸೌಲಭ್ಯ ಒದಗಿಸಲು ಅಗತ್ಯ ಜರೂರು ಕ್ರಮ ಕೈಗೊಳ್ಳಲು ಹಾಗೂ ಕೈಗೊಂಡ ಕ್ರಮ ಕುರಿತು ಕಾಲಕಾಲಕ್ಕೆ ಸರ್ಕಾರಕ್ಕೆ ಮಾಹಿತಿಯನ್ನು ನೀಡಲು ಕೋರಿದೆ.

ತಮ್ಮ ವಿಶ್ವಾಸಿ,

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
ಇಮೇಲ್: rk3452000@gmail.com
ಫೋನ್:22032806, ಫ್ಯಾಕ್ಸ್:22203175

**ಪ್ರತಿಯನ್ನು:**

1. ರಾಜ್ಯ ಎಲ್ಲಾ (30) ಜಿಲ್ಲಾ ಪಂಚಾಯತ್‌ಗಳ ಅಧ್ಯಕ್ಷರುಗಳು ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ (8) ಅಧೀಕ್ಷಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತಗಳು.
3. ರಾಜ್ಯದ ಎಲ್ಲಾ (38) ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ, ಕಾರ್ಯಪಾಲಕ ಇಂಜಿನಿಯರ್‌ಗಳು.
4. ರಾಜ್ಯದ ಎಲ್ಲಾ (176) ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು.